Akashvani : Bangalore
National Bulletin In Kannada
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

25.02.2025 19.35 hrs

<><*<><>*><>

ಮುಖ್ಯಾಂಶಗಳು

- ತಂತ್ರಜ್ಞಾನ ಬಳಕೆಯಿಂದ ವೈದ್ಯಕೀಯ ಚಿಕಿತ್ಸೆಯಲ್ಲಿ ನಿಖರತೆ ಹೆಚ್ಚಳ- ರಾಷ್ಟ್ರಪತಿ ದ್ರೌಪದಿ ಮುರ್ಮು
- ದೇಶದ ಅಭಿವೃದ್ಧಿಯಲ್ಲಿ ಎಲ್ಲಾ ರಾಜ್ಯಗಳ ಸಹಕಾರ ಅಗತ್ಯ- ಕೇಂದ್ರ ಗೃಹ ಸಚಿವ ಅಮಿತ್ ಶಾ
- ಭಾರತೀಯ ಕರಾವಳಿ ರಕ್ಷಣಾ ಪಡೆ ಸಿಬ್ಬಂದಿಗೆ ಸೇವಾ ಪದಕ ಪ್ರದಾನ ಮಾಡಿದ ರಕ್ಷಣಾ ಸಚಿವ ರಾಜನಾಥ್ ಸಿಂಗ್
- ದೆಹಲಿ ವಿಧಾನಸಭೆಯ ಗದ್ದಲ; ೨೧ ಆಪ್ ಶಾಸಕರು ದಿನದ ಮಟ್ಟಿಗೆ ಸದನದಿಂದ ಅಮಾನತು
- ಡಬ್ಲ್ಯು ಪಿಎಲ್ ಕ್ರಿಕೆಟ್; ಗುಜರಾತ್ ಜೈಂಟ್ಸ್- ಡೆಲ್ಲಿ ಕ್ಯಾಪಿಟಲ್ಸ್ ಮುಖಾಮುಖಿ

<><*<><>*><>

ದೇಶದ ಆರೋಗ್ಯ ಸಂಸ್ಥೆಗಳಲ್ಲಿ ಉತ್ತಮ ವೈದ್ಯಕೀಯ ಸೌಲಭ್ಯಗಳ ವಿಕೇಂದ್ರಿಕರಣ ಮತ್ತು ಹೆಚ್ಚಿನ ಸಂಶೋಧನೆಯ ಅಗತ್ಯತೆ ಕುರಿತು ರಾಷ್ಟ್ರಪತಿ ದ್ರೌಪದಿ ಮುರ್ಮು ಒತ್ತಿ ಹೇಳಿದರು. ಬಿಹಾರದ ಪಾಟ್ನಾದ ಬಾಪು ಸಭಾಘರ್‌ನಲ್ಲಿ ಪಾಟ್ನಾ ವೈದ್ಯಕೀಯ ಕಾಲೇಜು ಮತ್ತು ಶತಮಾನೋತ್ಸವ ಸಮಾರಂಭ ಉದ್ದೇಶಿಸಿ ಅವರು ಮಾತನಾಡಿದರು. ಸಣ್ಣ ನಗರಗಳಲ್ಲಿ ವೈದ್ಯಕೀಯ ಸೌಲಭ್ಯಗಳು ಲಭ್ಯವಿದ್ದರೆ, ಅದು ದೊಡ್ಡ ಸಂಸ್ಥೆಗಳ ಮೇಲಿನ ಒತ್ತಡವನ್ನು ಕಡಿಮೆ ಮಾಡುತ್ತದೆ ಎಂದರು. ವೈದ್ಯಕೀಯ ಕ್ಷೇತ್ರದಲ್ಲಿ ಕೃತಕ ಬುದ್ಧಿಮತ್ತೆ ಮತ್ತು ರೋಬೋಟಿಕ್ಸ್ ತಂತ್ರಜ್ಞಾನ ಬಳಕೆಯ ಉದಾಹರಣೆ ನೀಡಿದ ಅವರು, ತಂತ್ರಜ್ಞಾನದ ಬಳಕೆಯು ರೋಗಿಯ ಚಿಕಿತ್ಸೆಯಲ್ಲಿ ಸಾಮರ್ಥ್ಯ ಮತ್ತು ನಿಖರತೆಯನ್ನು ಹೆಚ್ಚಿಸುತ್ತದೆ ಎಂದು ಹೇಳಿದರು. ಬಡವರು ಮತ್ತು ನಿರ್ಗತಿಕರ ಸೇವೆಗಾಗಿ ಶ್ರಮಿಸುವಂತೆ ಅವರು ವೈದ್ಯ ಸಮುದಾಯಕ್ಕೆ ಕರೆ ನೀಡಿದರು. ಇದೇ ವೇಳೆ, ೫ ಸಾವಿರದ ೪೦೦ಕ್ಕೂ ಹೆಚ್ಚು ಹಾಸಿಗೆಗಳನ್ನು ಹೊಂದಿರುವ ವಿಶ್ವದ ಎರಡನೇ ಅತಿ ದೊಡ್ಡ ಆಸ್ಪತ್ರೆಯಾಗಿ ಪಾಟ್ನಾ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯನ್ನು ಅಭಿವೃದ್ಧಿಪಡಿಸುತ್ತಿರುವುದಕ್ಕಾಗಿ ರಾಷ್ಟ್ರಪತಿ ದ್ರೌಪದಿ ಮುರ್ಮು ಹರ್ಷ ವ್ಯಕ್ತಪಡಿಸಿದರು.

<><*<><>*><>

ಅಸ್ಸಾಂನ ಗುವಾಹಟಿಯಲ್ಲಿ ಅಡ್ವಾಂಟೇಜ್ ಅಸ್ಸಾಂ ೨.೦ ಹೂಡಿಕೆ ಮತ್ತು ಮೂಲಸೌಕರ್ಯ ಸಮಗ್ರ ಶೃಂಗಸಭೆಯನ್ನು ಪ್ರಧಾನಿ ನರೇಂದ್ರ ಮೋದಿ ಉದ್ಘಾಟಿಸಿದರು. ಬಳಿಕ ಮಾತನಾಡಿದ ಪ್ರಧಾನಿ, ಬರುವ ೨೦೩೦ರ ವೇಳೆಗೆ ಅಸ್ಸಾಂ ಸರ್ವಾಂಗೀಣ ಪ್ರಗತಿ ಸಾಧಿಸಲಿದೆ. ಅಸ್ಸಾಂ ಅಭಿವೃದ್ಧಿಯ ಹೆಬ್ಬಾಗಿಲಾಗಿದ್ದು, ಈಶಾನ್ಯ ರಾಜ್ಯಗಳ ಅಭಿವೃದ್ಧಿಗೆ ವಿಶೇಷ ಒತ್ತು ನೀಡಲಾಗಿದೆ. ಹೂಡಿಕೆಗೆ ಅಸ್ಸಾಂ ಪ್ರಮುಖ ತಾಣವಾಗಿದೆ ಎಂದರು. ಜಾಗತಿಕ ಆರ್ಥಿಕತೆಯಲ್ಲಿ ವ್ಯಾಪಕ ಬದಲಾವಣೆಯಾಗುತ್ತಿದ್ದು, ಇದರಲ್ಲಿ ಭಾರತದ ಪಾತ್ರ ಮಹತ್ವದ್ದಾಗಿದೆ. ಭಾರತದ ಕೈಗಾರಿಕೆಗಳು ದೇಶೀಯ ಅಗತ್ಯಗಳನ್ನು ಪೂರೈಸುತ್ತಿದ್ದು, ಜಗತ್ತಿಗಾಗಿ ಉತ್ಪಾದಿಸುವ ನಿಟ್ಟಿನಲ್ಲಿ ಕಾರ್ಯೋನ್ಮುಖವಾಗಬೇಕು ಎಂದು ಕರೆ ನೀಡಿದರು. ಅಸ್ಸಾಂ ಉತ್ಪಾದನಾ ಕ್ಷೇತ್ರದಲ್ಲಿ ಮಹತ್ವದ ಸಾಧನೆ ಮಾಡುತ್ತಿದ್ದು, ಪೂರ್ವಾಚಲ ಭಾಗದಲ್ಲಿ ತನ್ನ ಹೆಜ್ಜೆ ಗುರುತುಗಳನ್ನು ಮೂಡಿಸುತ್ತಿದೆ. ಸೆಮಿಕಂಡಕ್ಟರ್ ವಲಯದಲ್ಲಿ ಉತ್ಪಾದನೆಗೆ ವಿಶೇಷ ಗಮನ ಹರಿಸಿದ್ದು, ಭಾರತ ಈ ನಿಟ್ಟಿನಲ್ಲಿ ಪ್ರಮುಖ ತಾಣವಾಗಿ ಹೊರಹೊಮ್ಮುತ್ತಿದೆ. ನವೀಕೃತ ಇಂಧನ ಕ್ಷೇತ್ರದಲ್ಲಿ ಗಮನಾರ್ಹ ಪ್ರಗತಿ ಸಾಧಿಸುತ್ತಿದ್ದು, ೨೦೩೦ರ ವೇಳೆಗೆ ೫೦೦ ಗೀಗಾವ್ಯಾಟ್ ಹಸಿರು ಇಂಧನ ಉತ್ಪಾದನೆ ಗುರಿ ಹೊಂದಲಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

<><*<><>*><>

ಅಸ್ಸಾಂ, ಭಾರತದ ಬೆಳವಣಿಗೆಯ ಎಂಜಿನ್ ಆಗಲಿದೆ ಎಂದು ಕೇಂದ್ರ ಮಾಹಿತಿ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ಅಸ್ಸಾಂನ ಗುವಾಹಟಿಯಲ್ಲಿ 'ಅಡ್ವಾಂಟೇಜ್ ಅಸ್ಸಾಂ ೨.೦ ಹೂಡಿಕೆ ಮತ್ತು ಮೂಲಸೌಕರ್ಯ ಶೃಂಗಸಭೆ'ಯಲ್ಲಿ 'ವಿಕಸಿತ ಭಾರತಕ್ಕಾಗಿ ಅಸ್ಸಾಂನಲ್ಲಿ ಸೆಮಿಕಂಡಕ್ಟರ್ ಉತ್ಪಾದನೆ' ಎಂಬ ವಿಷಯದ ಕುರಿತು ಅಧಿವೇಶನವನ್ನುದ್ದೇಶಿಸಿ ಅವರು ಮಾತನಾಡಿದರು. ಜಾಗಿರೋಡ್‌ನಲ್ಲಿರುವ ಸೆಮಿಕಂಡಕ್ಟರ್ ಘಟಕವು ಅಸ್ಸಾಂ ಅನ್ನು ಸೆಮಿಕಂಡಕ್ಟರ್ ಹಬ್ ಆಗಿ ಪರಿವರ್ತಿಸುತ್ತದೆ ಎಂದರು. ಗುವಾಹಟಿಯ ರೈಲ್ವೆ ನಿಲ್ದಾಣದ ಭೂಮಿಯಲ್ಲಿ ಅತ್ಯಾಧುನಿಕ ಐಟಿ ಹಬ್ ಅನ್ನು ಅಭಿವೃದ್ಧಿಪಡಿಸಲಾಗುವುದು ಎಂದು ಅವರು ಘೋಷಿಸಿದರು. ಕೇಂದ್ರ ಸರ್ಕಾರವು ಅಸ್ಸಾಂಗಾಗಿ ಎರಡು ಹೊಸ ಅಮೃತ್ ಭಾರತ್ ರೈಲುಗಳು, ಬಿಟಿಆರ್ ಪ್ರದೇಶದಲ್ಲಿ ಒಂದು ರೈಲು ಕೋಚ್ ಉತ್ಪಾದನಾ ಘಟಕ ಮತ್ತು ಲುಮ್ಡಿಂಗ್‌ನಲ್ಲಿ ಒಂದು ರೈಲು ಎಂಜಿನ್ ಪುನರ್‌ನಿರ್ಮಾಣ ಘಟಕವನ್ನು ಮಂಜೂರು ಮಾಡಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ಮಾಹಿತಿ ನೀಡಿದರು.

<><*<><>*><>

೨೦೪೭ರ ವೇಳೆಗೆ ವಿಕಸಿತ ಭಾರತ ನಿರ್ಮಾಣಕ್ಕೆ ಮಧ್ಯಪ್ರದೇಶದಲ್ಲಿ ನಡೆದ ಜಾಗತಿಕ ಹೂಡಿಕೆದಾರರ ಸಮಾವೇಶ ಸಹಕಾರಿಯಾಗಲಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ. ಮಧ್ಯಪ್ರದೇಶದ ಭೋಪಾಲ್‌ನಲ್ಲಿಂದು ಏನೇ ಜಾಗತಿಕ ಹೂಡಿಕೆದಾರರ ಸಮಾವೇಶದ ಸಮಾರೋಪ ಸಮಾರಂಭವನ್ನುದ್ದೇಶಿಸಿ ಮಾತನಾಡಿದ ಅವರು, ಸಮಾವೇಶದ ಸಂದರ್ಭದಲ್ಲಿ ಸುಮಾರು ೩೦ ಲಕ್ಷದ ೭೭ ಸಾವಿರ ಕೋಟಿ ರೂಪಾಯಿ ಮೌಲ್ಯದ ಹೂಡಿಕೆ ಪ್ರಸ್ತಾವನೆಗಳನ್ನು ಸ್ವೀಕರಿಸಲಾಗಿದ್ದು, ತಿಳುವಳಿಕಾ ಒಪ್ಪಂದಗಳಿಗೆ ಸಹಿ ಹಾಕಲಾಗಿದೆ. ದೇಶದ ಅಭಿವೃದ್ಧಿಯಲ್ಲಿ ಎಲ್ಲಾ ರಾಜ್ಯಗಳ ಸಹಕಾರ ಪ್ರಮುಖವಾಗಿದೆ. ಕಳೆದ ಹತ್ತು ವರ್ಷಗಳಲ್ಲಿ ಎನ್‌ಡಿಎ ಸರ್ಕಾರ, ಅಭಿವೃದ್ಧಿಯ ಹೊಸ ಅಧ್ಯಾಯಕ್ಕೆ ನಾಂದಿ ಹಾಡಿದೆ ಎಂದರು.

ಧ್ವನಿ: ಅಮಿತ್ ಶಾ, ಕೇಂದ್ರ ಸಚಿವ

<><*<><>*><>

ನವದೆಹಲಿಯಲ್ಲಿಂದು ನಡೆದ ಸಮಾರಂಭದಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು, ಭಾರತೀಯ ಕರಾವಳಿ ರಕ್ಷಣಾ ಪಡೆಯ ಸಿಬ್ಬಂದಿಗೆ ಶೌರ್ಯ, ವಿಶಿಷ್ಟ ಸೇವಾ ಮತ್ತು ಪ್ರತಿಭಾನ್ವಿತ ಸೇವಾ ಪದಕಗಳನ್ನು ಪ್ರದಾನ ಮಾಡಿದರು. ನಂತರ ಸಮಾರಂಭವನ್ನುದ್ದೇಶಿಸಿ ಮಾತನಾಡಿದ ಸಚಿವರು, ಭಾರತೀಯ ಕರಾವಳಿ ರಕ್ಷಣಾ ಪಡೆಯ ದಕ್ಷತೆಯನ್ನು ಹೆಚ್ಚಿಸಲು ಭಾರತ ಸರ್ಕಾರ ಬದ್ಧವಾಗಿದೆ. ೨೦೨೫-೨೬ ಹಣಕಾಸು ವರ್ಷಕ್ಕೆ ೯ ಸಾವಿರದ ೬೭೬ ಕೋಟಿ ರೂಪಾಯಿಗಳನ್ನು ಮೀಸಲಿಡಲಾಗಿದೆ. ಹಿಂದಿನ ವರ್ಷದ ಬಜೆಟ್‌ಗಿಂತ ಶೇಕಡ ೨೬.೬ ರಷ್ಟು ಹೆಚ್ಚಳವಾಗಿದೆ ಎಂದು ಹೇಳಿದ್ದಾರೆ. ಭಾರತೀಯ ಕರಾವಳಿ ಕಾವಲುಪಡೆಗಾಗಿ ೧೪ ವೇಗದ ಪೆಟ್ರೋಲ್ ಹಡಗುಗಳು, ೬ ಏರ್‌ಕುಷನ್ ವಾಹನಗಳು, ೨೨ ಇಂಟರ್‌ಸೆಪ್ಟರ್ ದೋಣಿಗಳು, ೬ ಮುಂದಿನ ಪೀಳಿಗೆಯ ಆಫ್ ಶೋರ್ ಪೆಟ್ರೋಲ್ ಹಡಗುಗಳು ಮತ್ತು ೧೮ ಮುಂದಿನ ಪೀಳಿಗೆಯ ವೇಗದ ಪೆಟ್ರೋಲ್ ಹಡಗುಗಳನ್ನು ಖರೀದಿಸಲು ಕೇಂದ್ರ ಸರ್ಕಾರ ಅನುಮೋದನೆ ನೀಡಿದೆ ಎಂದು ಸಚಿವ ರಾಜನಾಥ್ ಸಿಂಗ್ ತಿಳಿಸಿದ್ದಾರೆ. ಭಾರತೀಯ ಕರಾವಳಿ ಕಾವಲುಪಡೆಯು, ವಿಶ್ವದ ಅತ್ಯಂತ ಪರಿಣಾಮಕಾರಿ ಕರಾವಳಿ ಪಡೆಗಳಲ್ಲಿ ಒಂದಾಗಿದೆ. ಸೈಬರ್ ದಾಳಿ, ದತ್ತಾಂಶ ಉಲ್ಲಂಘನೆ, ಸಿಗ್ನಲ್ ಜಾಮಿಂಗ್, ರಾಡಾರ್ ಮತ್ತು ಜಿಪಿಎಸ್ ವಂಚನೆಯಂತಹ ಅನೇಕ ತಾಂತ್ರಿಕ ಬೆದರಿಕೆಗಳನ್ನು ಭಾರತೀಯ ಕರಾವಳಿ ಕಾವಲುಪಡೆ ಎದುರಿಸಬೇಕಾಗಿದೆ ಎಂದು ಸಚಿವರು ಹೇಳಿದರು.

<><*<><>*><>

ದೆಹಲಿ ವಿಧಾನಸಭೆಯಲ್ಲಿಂದು ಅಶಿಸ್ತಿನ ವರ್ತನೆಗಾಗಿ ೨೧ ಆಪ್ ಶಾಸಕರನ್ನು ದಿನದ ಮಟ್ಟಿಗೆ ಅಮಾನತುಗೊಳಿಸಿ, ಸದನದಿಂದ ಹೊರ ಕಳುಹಿಸಲಾಯಿತು. ಅಮಾನತುಗೊಂಡವರಲ್ಲಿ

ವಿಧಾನಸಭೆಯ ವಿರೋಧ ಪಕ್ಷದ ನಾಯಕಿ ಅತಿಶಿ ಮತ್ತು ಆಪ್ ಹಿರಿಯ ನಾಯಕ ಗೋಪಾಲ್ ರೈ ಸೇರಿದ್ದಾರೆ. ಲೆಫ್ಟಿನೆಂಟ್ ಗವರ್ನರ್ ವಿ.ಕೆ.ಸಕ್ಸೆನಾ ಅವರು, ಇಂದು ಬೆಳಗ್ಗೆ ಸದನವನ್ನುದ್ದೇಶಿಸಿ ಮಾತನಾಡಲು ಆರಂಭಿಸಿದರು. ಈ ವೇಳೆ, ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ ಅವರ ಕೊಠಡಿಯಿಂದ ಡಾ.ಬಿ.ಆರ್.ಅಂಬೇಡ್ಕರ್ ಮತ್ತು ಭಗತ್‌ಸಿಂಗ್ ಅವರ ಭಾವಚಿತ್ರಗಳನ್ನು ತೆಗೆದು ಹಾಕಲಾಗಿದೆ ಎಂದು ಆರೋಪಿಸಿ, ವಿರೋಧ ಪಕ್ಷದ ಸದಸ್ಯರು ಘೋಷಣೆ ಕೂಗಲು ಆರಂಭಿಸಿದರು. ಈ ಆರೋಪವನ್ನು ಆಡಳಿತರೂಢ ಬಿಜೆಪಿ ಈಗಾಗಲೇ ನಿರಾಕರಿಸಿದೆ. ಗದ್ದಲದ ನಡುವೆ ವಿಧಾನಸಭಾಧ್ಯಕ್ಷ ವಿಜೇಂದರ್ ಗುಪ್ತಾ ಸದನದಲ್ಲಿ ಶಾಂತಿ ಕಾಪಾಡುವಂತೆ ಪದೇ ಪದೆ ಮನವಿ ಮಾಡಿದರು. ಆದರೆ, ವಿರೋಧ ಪಕ್ಷದ ಸದಸ್ಯರು ತಮ್ಮ ಪ್ರತಿಭಟನೆಯನ್ನು ಮುಂದುವರಿಸಿದರು. ನಂತರ ಅಶಿಸ್ತಿನ ವರ್ತನೆಗಾಗಿ ಪ್ರತಿಭಾಟನಾನಿರತ ಆಪ್ ಶಾಸಕರನ್ನು ಸದನದಿಂದ ದಿನದಮಟ್ಟಿಗೆ ಅಮಾನತುಗೊಳಿಸಿರುವುದಾಗಿ ಘೋಷಿಸಿದರು. ಅಮಾನತು ನಿರ್ಧಾರವನ್ನು ವಿರೋಧಿಸಿ, ಆಪ್ ಶಾಸಕರು ಸದನದ ಹೊರಗೆ ಪ್ರತಿಭಟನೆ ನಡೆಸಿದರು ಎಂದು ನಮ್ಮ ಬಾತ್ಮೀದಾರರು ವರದಿ ಮಾಡಿದ್ದಾರೆ.

<><*<><>*><>

ನವದೆಹಲಿಯ ಸಂಸತ್ ಭವನದಲ್ಲಿಂದು ಒಂದು ದೇಶ, ಒಂದು ಚುನಾವಣೆ ಕುರಿತ ಸಂಸತ್ತಿನ ಜಂಟಿ ಸಮಿಯ ಸಭೆ ನಡೆಯಿತು. ಸಭೆಯಲ್ಲಿ ಸಮಿತಿಯು ಕಾನೂನು ತಜ್ಞರೊಂದಿಗೆ ಸಂವಾದ ನಡೆಸಿತು. ೩೯ ಸದಸ್ಯರ ಸಮಿತಿಯು, ಲೋಕಸಭೆಯಿಂದ ೨೭ ಸದಸ್ಯರು ಮತ್ತು ರಾಜ್ಯಸಭೆಯಿಂದ ೧೨ ಸದಸ್ಯರನ್ನೊಳಗೊಂಡಿದೆ.

<><*<><>*><>

ಫ್ರಾನ್ಸ್ ಪ್ರವಾಸದಲ್ಲಿರುವ ಭಾರತೀಯ ಸೇನಾ ಮುಖ್ಯಸ್ಥ ಜನರಲ್ ಉಪೇಂದರ್ ದ್ವಿವೇದಿ ಅವರು ಇಂದು ಫ್ರಾನ್ಸ್ ಸೇನಾ ಮುಖ್ಯಸ್ಥ ಜನರಲ್ ಪಿಯರೆ ಶಿಲ್ ಅವರೊಂದಿಗೆ ಮಾತುಕತೆ ನಡೆಸಿದರು. ಸಭೆಯಲ್ಲಿ ಭಾರತ ಮತ್ತು ಫ್ರಾನ್ಸ್ ನಡುವಿನ ರಕ್ಷಣಾ ಸಹಕಾರದ ಅಂಶಗಳ ಕುರಿತು ಚರ್ಚಿಸಲಾಯಿತು. ಎರಡು ಸೇನೆಗಳ ನಡುವಿನ ಮಿಲಿಟರಿ ಬಾಂಧವ್ಯವನ್ನು ಮತ್ತಷ್ಟು ಹೆಚ್ಚಿಸಲು ತೀರ್ಮಾನಿಸಲಾಯಿತು. ಜಾಗತಿಕ ಶಾಂತಿ ಮತ್ತು ಸುರಕ್ಷತೆಗಾಗಿ ಪರಸ್ಪರ ಬದ್ಧತೆಯನ್ನು ಪುನರುಚ್ಚರಿಸಲಾಯಿತು.

<><*<><>*><>

'ಹೇರತ್ ಪೋಶ್ಟೆ' ಹಬ್ಬದ ಸಂದರ್ಭದಲ್ಲಿ ಕಾಶ್ಮೀರಿ ಪಂಡಿತರಿಗೆ ಪ್ರಧಾನಿ ನರೇಂದ್ರ ಮೋದಿ ಶುಭಾಶಯ ಕೋರಿದ್ದಾರೆ. ಸಾಮಾಜಿಕ ಜಾಲತಾಣದ ಪೋಸ್ಟ್‌ನಲ್ಲಿ ಪ್ರಧಾನಿ ಮೋದಿ, ಈ ಹಬ್ಬವು

ಕಾಶ್ಮೀರಿ ಪಂಡಿತರ ರೋಮಾಂಚಕ ಸಂಸ್ಕೃತಿಯೊಂದಿಗೆ ನಿಕಟ ಸಂಬಂಧ ಹೊಂದಿದೆ ಎಂದು ಹೇಳಿದರು. ಇದೇ ವೇಳೆ ಎಲ್ಲ ಕಾಶ್ಮೀರಿ ಪಂಡಿತರಿಗೆ ಉತ್ತಮ ಆರೋಗ್ಯ ಮತ್ತು ಸಮೃದ್ಧಿಯನ್ನು ಹಾರೈಸಿದರು.

<><*<><>*><>

ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವಾಲಯ ಆಯೋಜಿಸಿರುವ ಮುಂಬರುವ ವಿಶ್ವ ದೃಶ್ಯ, ಶ್ರವಣ ಮತ್ತು ಮನೋರಂಜನೆ ಶೃಂಗಸಭೆ- ವೇವ್ಸ್ ಹಿನ್ನೆಲೆಯಲ್ಲಿ 'ವೇವ್ಸ್ ಪ್ರೋಮೋ ವಿಡಿಯೋ ಚಾಲೆಂಜ್' ಹಮ್ಮಿಕೊಳ್ಳಲಾಗಿದೆ. ಈ ಉಪಕ್ರಮವು ಕ್ರಿಯೇಟ್ ಇನ್ ಇಂಡಿಯಾ ಸವಾಲಿನ ಭಾಗವಾಗಿದ್ದು, ಸೃಜನಶೀಲ ನಿರ್ದೇಶಕರು, ಕಥೆಗಾರರು, ರಚನೆಕಾರರಿಗೆ ಅವಕಾಶ ಕಲ್ಪಿಸಲಾಗಿದೆ. ತಾಜಾ ವಿಷಯಗಳ ಕುರಿತು ತಮ್ಮ ಪ್ರತಿಭೆಯನ್ನು ಪ್ರದರ್ಶಿಸಲು ವೇವ್ಸ್ ಪ್ರೋಮೋ ವಿಡಿಯೋ ಚಾಲೆಂಜ್ ಸೂಕ್ತ ವೇದಿಕೆಯಾಗಿದೆ. ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಸಹಯೋಗದೊಂದಿಗೆ ಭಾರತೀಯ ಪ್ರಸಾರ ಮತ್ತು ಡಿಜಿಟಲ್ ಫೌಂಡೇಶನ್ ಈ ಉಪಕ್ರಮವನ್ನು ಆಯೋಜಿಸಿದ್ದು, ಮೇ ತಿಂಗಳ ೧ ರಿಂದ ೪ರ ವರೆಗೆ ಮುಂಬೈನ ಜಿಯೋ ವರ್ಲ್ಡ್ ಕನ್ವೇನ್ಷನ್ ಸೆಂಟರ್‌ನಲ್ಲಿ ಆಯೋಜಿಸಲಾಗಿದೆ.

<><*<><>*><>

ಬೆಂಗಳೂರಿನ ಎಂ.ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಮಹಿಳಾ ಪ್ರೀಮಿಯರ್ ಲೀಗ್-ಡಬ್ಲ್ಯೂಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಗುಜರಾತ್ ಜೈಂಟ್ಸ್ ಮತ್ತು ಡೆಲ್ಲಿ ಕ್ಯಾಪಿಟಲ್ಸ್ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ಡೆಲ್ಲಿ ಕ್ಯಾಪಿಟಲ್ಸ್ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

<><*<><>*><>

ಪಾಕಿಸ್ತಾನದ ರಾವಲ್ಪಿಂಡಿ ಕ್ರಿಕೆಟ್ ಕ್ರೀಡಾಂಗಣದಲ್ಲಿ ಇಂದು ನಡೆಯಬೇಕಿದ್ದ ಐಸಿಸಿ ಚಾಂಪಿಯನ್ಸ್ ಟ್ರೋಫಿ ಪಂದ್ಯಾವಳಿಯ 'ಬಿ' ಗುಂಪಿನ ಆಸ್ಟ್ರೇಲಿಯಾ ಮತ್ತು ದಕ್ಷಿಣಾ ಆಫ್ರಿಕಾ ನಡುವಿನ ಪಂದ್ಯವು ಮಳೆಯ ಕಾರಣ ರದ್ದುಗೊಂಡಿದೆ.

<><*<><>*><>

ಡಬ್ಲ್ಯುಟಿಟಿ ಯೂತ್ ಕಂಟೆಂಡರ್ ವಡೋದರಾ-೨೦೨೫ ಟೇಬಲ್ ಟೆನಿಸ್ ಪಂದ್ಯಾವಳಿ ನಾಳೆ ಆರಂಭವಾಗಲಿದ್ದು, ಶ್ರೀಲಂಕಾ, ಕೊರಿಯಾ, ಅಮೆರಿಕ, ಆಸ್ಟ್ರೇಲಿಯಾ, ಇಂಗ್ಲೆಂಡ್, ಆಂಟಿಗುವಾ, ಬಾರ್ಬುಡಾ ಸೇರಿದಂತೆ ಎಂಟು ದೇಶಗಳ ಸ್ಪರ್ಧಿಗಳೊಂದಿಗೆ ೧೬೫ ಭಾರತೀಯ ಆಟಗಾರರು ಭಾಗವಹಿಸಲಿದ್ದಾರೆ. ವಿಶ್ವದ ೭ನೇ ಶ್ರೇಯಾಂಕಿತ ಅಂಕುರ್ ಭಟ್ಟಾಚಾರ್ಜಿ, ಸಯಾಲಿ ವಾನಿ

ಮತ್ತು ಉದಯೋನ್ಮುಖ ತಾರೆ ದಿವ್ಯಾಂಶಿ ಭೌಮಿಕ್ ಅವರೊಂದಿಗೆ ನಾಲ್ಕು ದಿನಗಳ ಯೂತ್ ಟೇಬಲ್ ಟೆನಿಸ್ ಪಂದ್ಯಾವಳಿಯಲ್ಲಿ ಭಾರತವನ್ನು ಮುನ್ನಡೆಸಲಿದ್ದಾರೆ. ನಾಳೆ ಆರಂಭಿಕ ದಿನದಂದು, ೧೭ ವರ್ಷದೊಳಗಿನ ಮತ್ತು ೧೫ ವರ್ಷದೊಳಗಿನ ಬಾಲಕರ ಮತ್ತು ಬಾಲಕಿಯರ ವಿಭಾಗಗಳಲ್ಲಿ ಪಂದ್ಯಗಳು ನಡೆಯಲಿದೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>